ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :

ಎ) ಹೌದು.

ಬಿ) ಕರ್ನಾಟಕ ಪುರಸಭೆ ಕಾಯ್ದೆ 1964ರ ನಿಯಮ 11ರ ಉಪನಿಯಮ 4ರನ್ವಯ ಬದಲಾವಣೆ ಮಾಡಲಾಗುವುದು.

ಸಿ) ಕೇಂದ್ರ ಸರ್ಕಾರದಿಂದ ಜನಗಣಪತಿ ನಿರ್ದೇಶನಾಲಯವು 2001ನೇ ಸಾಲಿನ ಜನಗಣತಿ ಸಮೀಕ್ಷೆ ಪ್ರಗತಿಯಲ್ಲಿರುವುದರಿಂದ 31-3-2001 ರವರೆಗೆ ಹೊಸದಾಗಿ ನಗರ, ಪುರ ಮತ್ತು ಪಟ್ಟಣ ಪಂಚಾಯತಿ ರಚಿಸುವ ಅಥವಾ ಗಡಿ ಪ್ರದೇಶ ವಿಸ್ತರಿಸುವ ಬಗ್ಗೆ ನಿರ್ಬಂಧವಿರುತ್ತದೆ. ಆ ನಂತರ ಸಂಬಂಧಿಸಿದ ಜಿಲ್ಲಾಧಿಕಾರಿಯವರಿಂದ ಪ್ರಸ್ತಾವನೆ ಬಂದಲ್ಲಿ ವಿಷಯವನ್ನು ಪರಿಶೀಲಿಸಲಾಗುವುದು.

ಡಿ) ಮೀಸಲಾತಿ ಬದಲಾವಣೆಯನ್ನು ನಿಯಮಾನುಸಾರ ಚುನಾವಣೆಯ ಮುಂಚಿತವಾಗಿ ಮಾಡಲಾಗುವುದು. ಹಾಗೂ ಪುರಸಭೆಗೆ ಹಳ್ಳಿಗಳನ್ನು ಸೇರಿಸುವ ಯಾವುದೇ ಪ್ರಕ್ರಿಯೆ ಜನಗಣತಿ ನಿರ್ದೇಶನಾಲಯದ ನಿರ್ಬಂಧ ಇರುವ ಕಾರಣ ಈಗ ಮಾಡಲಾಗುವುದಿಲ್ಲ.

ರಾಜ್ಯದಲ್ಲಿರುವ ಸರ್ಕಾರದ ವಿದ್ಯಾರ್ಥಿನಿಲಯಗಳ ಕುರಿತು

4798 - ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಎ) *ರಾಜ್ಯದಲ್ಲಿರುವ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳೆಷ್ಟು?*

ಬಿ) *ಸದರಿ ವಿದ್ಯಾರ್ಥಿನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?*

ಸಿ) *ವಿದ್ಯಾರ್ಥಿಗಳಿಗೆ ಒದಗಿಸುತ್ತಿರುವ ಆಹಾರ ಸಾಮಗ್ರಿಗಳು ಕಳಪೆ ಗುಣಮಟ್ಟದ್ದಾಗಿದ್ದು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?*

ಡಿ) *ಈ ವಿದ್ಯಾರ್ಥಿನಿಲಯಗಳ ವ್ಯವಸ್ಥೆಯನ್ನು ಉತ್ತಮಗೊಳಿಸಲು ಸರ್ಕಾರ ಯಾವ ಕ್ರಮ ಹಮ್ಮಿಕೊಂಡಿದೆ?*

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಎ) ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಒಟ್ಟು 1340 ಸರ್ಕಾರಿ ವಿದ್ಯಾರ್ಥಿನಿಲಯಗಳು ಇರುತ್ತವೆ. ಅಲ್ಪಸಂಖ್ಯಾತರ ಇಲಾಖೆಯಲ್ಲಿ ಒಟ್ಟು 5 ಸರ್ಕಾರಿ ವಿದ್ಯಾರ್ಥಿನಿಲಯಗಳು ಇರುತ್ತದೆ.

ಬಿ) ಈ ವಿದ್ಯಾರ್ಥಿನಿಲಯಗಳಲ್ಲಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ. 71525 ಆಗಿರುತ್ತದೆ.

ಸಿ) ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಪಡೆದುಕೊಳ್ಳುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ. ನಿರ್ದಿಷ್ಟ ದೂರುಗಳು ಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಈ) ವಿದ್ಯಾರ್ಥಿನಿಲಯಗಳ ವ್ಯವಸ್ಥೆಯನ್ನು ಉತ್ತಮ ಪಡಿಸಲು ವಸತಿ ನಿಲಯಗಳನ್ನು ತಪಾಸಣೆ ಮಾಡಿ, ಸಮಸ್ಯೆಗಳಿದ್ದಲ್ಲಿ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆನೇಕಲ್ ತಾಲ್ಲೂಕಿನಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ

4801 - ಶ್ರೀ ಸುಬ್ಬಾರೆಡ್ಡಿ ಕೆ.ಎನ್. (ಬಸವನಗುಡಿ) : ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಜಿಲ್ಲೆ, ಆನೇಕಲ್ಲು ತಾಲ್ಲೂಕು, ಬನ್ನೇರುಘಟ್ಟ, ಶಿವನಹಳ್ಳಿ, ರಾಗಿಹಳ್ಳಿ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಪ್ರದೇಶಗಳಲ್ಲಿ ಅಕ್ರಮ ಗಣಿಗಾರಿಕೆ ನಿಲ್ಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ರಾಗಿಹಳ್ಳಿ ಮತ್ತು ಶಿವನಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಅನಧಿಕೃತ ಗಣಿಗಾರಿಕೆಯನ್ನು ತಡೆ ಹಿಡಿಯಲಾಗಿ ಬನ್ನೇರುಘಟ್ಟ ಪೋಲೀಸ್ ಠಾಣೆಯಲ್ಲಿ 2 ಮೊಕದ್ದಮೆಗಳನ್ನು ದಾಖಲು ಮಾಡಲಾಗಿದೆ. ಹಾಗೂ ದಂಡ ರೂಪದಲ್ಲಿ ರೂ. 11,200.00ಗಳನ್ನು ವಸೂಲು ಮಾಡಲಾಗಿದೆ.

ಕೋಲಾರ ನಗರದಲ್ಲಿ ಮನೆಗಳ ನಿರ್ಮಾಣ ಹಾಗೂ ಮೂಲಭೂತ ಸೌಲಭ್ಯಗಳು

4802 - ಶ್ರೀ ಶ್ರೀನಿವಾಸಗೌಡ ಕುದುವನಹಳ್ಳಿ ಕೆ. (ಕೋಲಾರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ನಗರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಾಣಗೊಂಡ ಮನೆಗಳೆಷ್ಟು?

ಆ) ನಿರ್ಮಾಣಗೊಂಡ ಮನೆಗಳ ನಿವಾಸಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆ?

ಇ) ಹಾಗಿದ್ದಲ್ಲಿ ಎಷ್ಟು ಮನೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ?

ಈ) ಅನಧಿಕೃತ ಮನೆಗಳನ್ನು ಸಕ್ರಮಗೊಳಿಸಲು ಕ್ರಮ ಜರುಗಿಸಲಾಗಿದೆಯೆ?

ಉ) ಹಾಗಿದ್ದಲ್ಲಿ ಬರುವ ಆದಾಯವೆಷ್ಟು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) 4934